# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(6)ಪಿಆರ್/270/23-24

ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 28. 2. 24

**ಕಛೇರಿ ಆದೇಶ**

ವಿಷಯ: ಶ್ರೀ ಬಿ. ಆರ್. ಚಂದ್ರಶೇಖರ್, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಇವರನ್ನು ಪಾಲಿಕೆಯ ಸೇವೆಯಿಂದ ಬಿಡುಗಡೆ ಮಾಡುವ ಬಗ್ಗೆ.

ಉಲ್ಲೇಖ: 1) ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಅಧಿಸೂಚನೆ ಸಂಖ್ಯೆ: ನಅಇ 422 ಎಂ.ಎನ್.ಯು 2023, ದಿನಾಂಕ: 17-01-2024

2) ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ನಿಯೋಜನಾ ನೀತಿ ಆದೇಶ ಸಂಖ್ಯೆ: ನಅಇ 142 ಎಂ.ಎನ್.ಯು 2021, ದಿನಾಂಕ: 07-01-2022

----------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಶ್ರೀ ಬಿ. ಆರ್. ಚಂದ್ರಶೇಖರ್, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಲೋಕೋಪಯೋಗಿ ಇಲಾಖೆಯಿಂದ ಎರವಲು ಸೇವೆಯ ಮೇಲೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಮುಖ್ಯ ಅಭಿಯಂತರರು (ಯೋಜನೆ-ಕೇಂದ್ರ) ಕಛೇರಿಯ ಕಾರ್ಯಪಾಲಕ ಅಭಿಯಂತರರು-7 (ಯೋಜನೆ-ಕೇಂದ್ರ) ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವ ಇವರ ನಿಯೋಜನಾ ಅವಧಿ ಮುಕ್ತಾಯಗೊಂಡಿದ್ದು, ಉಲ್ಲೇಖ-(1)ರ ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ಅಧಿಸೂಚನೆಯಲ್ಲಿ ಸದರಿಯವರ ಸೇವೆಯನ್ನು ಮಾತೃ ಇಲಾಖೆಗೆ ಹಿಂದಿರುಗಿಸಿರುವುದನ್ನು ಪರಿಗಣಿಸಿ, ಸದರಿಯವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಈ ಕೆಳಕಂಡ ಷರತ್ತಿಗೊಳಪಡಿಸಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸಿ, ಮಾತೃ ಇಲಾಖೆಗೆ ಹಿಂದಿರುಗಿಸಿ ಆದೇಶಿಸಿದೆ.

**ಷರತ್ತುಗಳು:-**

1. ಸದರಿ ಅಭಿಯಂತರರು ನಗರ ಪಾಲಿಕೆಯ ಸೇವಾ ಅವಧಿಯಲ್ಲಿ ನಗರ ಪಾಲಿಕೆಗೆ ಯಾವುದೇ ಆರ್ಥಿಕ ಬಾಕಿಯನ್ನು ಉಳಿಸಿಕೊಂಡಿದ್ದಲ್ಲಿ ಸದರಿಯವರಿಂದ ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ.
2. ಸದರಿ ಅಭಿಯಂತರರ ವಿರುದ್ಧ ಇಲಾಖಾ ವಿಚಾರಣೆ ಬಾಕಿ ಇದ್ದಲ್ಲಿ ನಿಯಮಾನುಸಾರ ಕ್ರಮಜರುಗಿಸುವ ಷರತ್ತಿಗೊಳಪಡಿಸಿದೆ.
3. ಪಾಲಿಕೆಯ ಹಿಂದಿನ ವರ್ಷಗಳ ಆಡಿಟ್ ವರದಿಗಳಲ್ಲಿ ಯಾವುದೇ ಆರ್ಥಿಕ ಬಾಕಿಯನ್ನು ಸದರಿಯವರಿಂದ ವಸೂಲಾತಿ ಮಾಡಲು ಸೂಚಿಸಿದಲ್ಲಿ, ಅಂತಹ ಮೊತ್ತವನ್ನು ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಅವುಗಳಿಗೆ ಸಮರ್ಪಕ ಉತ್ತರ ನೀಡುವ ಷರತ್ತು ವಿಧಿಸಿದೆ.
4. ಸದರಿಅಭಿಯಂತರರು ನಗರ ಪಾಲಿಕೆಯ ವಸತಿಗೃಹದಲ್ಲಿ ವಾಸಿಸುತ್ತಿದ್ದಲ್ಲಿ ಕೂಡಲೇ ತೆರವುಗೊಳಿಸುವ ಷರತ್ತಿಗೊಳಪಡಿಸಿದೆ.
5. ವಾಕಿ ಟಾಕಿ, ಮೊಬೈಲ್ ಫೋನ್, ಸಿಮ್‌ಕಾರ್ಡ್, ಹೆಲ್ತ್‌ಕಾರ್ಡ್, ಗುರುತಿನ ಚೀಟಿ (Identity card) ಹಾಗೂ ಲ್ಯಾಪ್ ಟಾಪ್‌ಗಳನ್ನು ಪಾಲಿಕೆಯಿಂದ ಪಡೆದಿದ್ದಲ್ಲಿ ಇವುಗಳನ್ನು ಪಾಲಿಕೆಗೆ ಹಿಂದಿರುಗಿಸುವ ಷರತ್ತಿಗೊಳಪಡಿಸಿದೆ.

ಮೇಲ್ಕಂಡ ಆದೇಶದನ್ವಯ ಸಂಬಂಧಪಟ್ಟ ಬಟವಾಡೆ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳುವುದು.

SDA 04/03/2024

(ಮಾನ್ಯ ಮುಖ್ಯ ಆಯುಕ್ತರು ರವರ ಆದೇಶದ ಮೇರೆಗೆ)

28/2
ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
28/2/24

**ಪ್ರತಿಯನ್ನು :**

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
: ಮಾನ್ಯ ವಿಶೇಷ ಆಯುಕ್ತರು (ಯೋಜನೆ) / ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.

........2

ಸಂಖ್ಯೆ 1493 02/03/2024

: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ರವರಿಗೆ ಕಳುಹಿಸಿದೆ

: ಸರ್ಕಾರದ ಅಧೀನ ಕಾರ್ಯದರ್ಶಿಗಳು, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಬೆಂಗಳೂರು ರವರಿಗೆ ಕಳುಹಿಸಿದೆ.

: ಪ್ರಧಾನ ಅಭಿಯಂತರರು ರವರಿಗೆ / ಮುಖ್ಯ ಅಭಿಯಂತರರು (ಯೋಜನೆ-ಕೇಂದ್ರ) ರವರಿಗೆ ಕಳುಹಿಸಿದೆ.

: ಉಪ ಮುಖ್ಯ ಮಾಹಿತಿ ಅಧಿಕಾರಿ, ಬಿ.ಬಿ.ಎಂ.ಪಿ ರವರಿಗೆ ಕಳುಹಿಸುತ್ತಾ, ಸದರಿಯವರು ಮೊಬೈಲ್ ಫೋನ್, ಮತ್ತು ಸಿಮ್ ಕಾರ್ಡ್ ಅನ್ನು ಪಾಲಿಕೆಗೆ ಹಿಂದಿರುಗಿಸಿರುವ ಬಗ್ಗೆ ದೃಢೀಕರಿಸಿಕೊಳ್ಳುವುದು.

: ಕಾರ್ಯಪಾಲಕ ಅಭಿಯಂತರರು-7(ಯೋಜನೆ-ಕೇಂದ್ರ) ವಿಭಾಗ ರವರಿಗೆ ಕಳುಹಿಸಿದೆ.

: ಮು.ಲೆ.ಅ / ಮು.ಲೆ.ಪ ರವರಿಗೆ ರವರಿಗೆ /ಉ.ನಿ (ಹಣಕಾಸು-ಕೇಂದ್ರ) ರವರಿಗೆ ಕಳುಹಿಸಿದೆ.

: ಸಂಬಂಧಪಟ್ಟ ಅಭಿಯಂತರರಿಗೆ / ಕಛೇರಿ ಪ್ರತಿ.